**3** ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ.,ರವರ ನ್ಯಾಯಾಲಯ, ಕಡೂರು.

<u>ಸಿ.ಸಿ.ನಂ. **649/2019**</u>

ದಿನಾಂಕ: **06-03-2026** ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

| | | |
|---|---|---|
| ಸಾಕ್ಷಿಯ ಹೆಸರು : | ಕೆ ಸತ್ಯನಾರಾಯಣಸ್ವಾಮಿ | ಚಾಸಾ-20, ಪ್ರಾಸ-9 |
| ತಂದೆಯ ಹೆಸರು : | ಜಿ ವಿ ಕಾಳಪ್ಪ | |
| ವಯಸ್ಸು : | 63 ವರ್ಷ | |
| ಉದ್ಯೋಗ : | ನಿವೃತ್ತ ಪೋಲಿಸ್ ವೃತ್ತ ನಿರೀಕ್ಷಕ | |
| ವಾಸ : | ಚಿತ್ರದರ್ಗ | |

<u>ಮುಖ್ಯ ವಿಚಾರಣೆ: ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ:</u>

ನಾನು ದಿ: 03.10.2018 ರಿಂದ 18.11.2019 ರವರೆಗೆ ನಾನು ಬೀರೂರು ವೃತ್ತದಲ್ಲಿ ವೃತ್ತ ನಿರೀಕ್ಷಕನಾಗಿ ಕರ್ತವ್ಯ ನಿರ್ವಹಿಸಿದ್ದೇನೆ.

ದಿ: 03.10.2018 ರಂದು ಈ ಪ್ರಕರಣದ ಕಡತವನ್ನು ಮುಂದಿನ ತನಿಖೆ ಬಗ್ಗೆ ಬೀರೂರು ವೃತ್ತದ ಪ್ರಭಾರ ವೃತ್ತ ನಿರೀಕ್ಷಕರಾದ ಕೆ. ಸತ್ಯನಾರಾಯಣ ರವರಿಂದ ಪಡೆದಿರುತ್ತೇನೆ. ದಿ: 19.10.2018 ರಂದು ಠಾಣಾ ಅಪರಾಧ ಸಿಬ್ಬಂದಿಗಳಾದ ಚಾಸಾ-14 ರಿಂದ 16 ರವರು ಪ್ರಕರಣದ 1 ನೇ ಆರೋಪಿ ಹನುಮಂತಪ್ಪ ರವರನ್ನು ಬಿ ಕೋಡಿಹಳ್ಳಿ ಗ್ರಾಮದಲ್ಲಿ ಪತ್ತೆ ಮಾಡಿ ತಂದು ನನ್ನ ಮುಂದೆ ಹಾಜರುಪಡಿಸಿರುತ್ತಾರೆ. ಸದರಿಯವರನ್ನು ಕೂಲಂಕುಷವಾಗಿ ವಿಚಾರ ಮಾಡಲಾಗಿ ಆರೋಪಿಯು ಕಳ್ಳತನ ಮಾಡಿರುವ ಬಗ್ಗೆ ಖಚಿತಪಡಿಸಿಕೊಂಡು ಅರೋಪಿಯ ಸ್ವ ಇಚ್ಛಾ ಹೇಳಿಕೆ ಪಡೆದಿರುತ್ತೇನೆ. ನಂತರ ಆರೋಪಿಯ ವಿರುದ್ಧ ದಸ್ತಗಿರಿ ಕ್ರಮ ಜರುಗಿಸಿ ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೇನೆ. ಅದೇ ದಿನ ಪಿರ್ಯಾದುದಾರರ ಮರು ಹೇಳಿಕೆ ಹಾಗೂ ಸಾಕ್ಷಿದಾರರಾದ ಚಾಸಾ-9, 14 ರಿಂದ 16 ರವರ ಹೇಳಿಕೆಯನ್ನು ದಾಖಲಿಸಿರುತ್ತೇನೆ. ತನಿಖೆ ಪೂರ್ಣಗೊಳಿಸಿ ಆರೋಪಿತರ ವಿರುದ್ಧ ದೋಷರೋಪಣಾ ಪತ್ರ ಸಲ್ಲಿಸಲು ಸಾಕಷ್ಟು ಸಾಕ್ಷ್ಯಧಾರಗಳು ಇದ್ದ ಕಾರಣ ನ್ಯಾಯಾಲಯಕ್ಕೆ ದೋಷರೋಪಣಾ ಪತ್ರ ಸಲ್ಲಿಸಿರುತ್ತೇನೆ.

<u>ಪಾಟೀಸವಾಲು: ಆರೋಪಿ ಪರ ಶ್ರೀ. ಎಂ ಎಸ್ ಬಿ ವಕೀಲರಿಂದ:</u>

1 ನೇ ಆರೋಪಿ ಸ್ವ ಇಚ್ಛಾ ಹೇಳಿಕೆ ನೀಡದಿದ್ದರೂ ಬಲವಂತವಾಗಿ ಸ್ವ ಇಚ್ಛಾ ಹೇಳಿಕೆ ಪಡೆದಿರುತ್ತೇನೆ ಎಂದರೆ ಸರಿಯಲ್ಲ. ನಾನು ಯಾವುದೇ ಸಾಕ್ಷಿದಾರರ ಹೇಳಿಕೆ ಪಡೆದಿಲ್ಲ ಎಂದರೆ ಸರಿಯಲ್ಲ. ಚಾಸಾ-1 ರವರು ಮರು ಹೇಳಿಕೆ ನೀಡದಿದ್ದರೂ ಆರೋಪಿಗೆ ತೊಂದರೆ ನೀಡಲು ಅವರ ಮರು ಹೇಳಿಕೆ ಸೃಷ್ಟಿಸಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿತರಿಗೂ ಘಟನೆಗೂ ಸಂಬಂಧ ಇಲ್ಲದಿದ್ದರೂ ಸುಳ್ಳು ದೋಷಾರೋಪಣಾ ಪತ್ರ ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ ಃ ಇಲ್ಲ

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೇ ಸ ಇ

Sd/-
3 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ:ದ:ನ್ಯಾ:ದಂ.,ರವರು, ಕಡೂರು.